ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ಅಕ್ರಮ ಸಕ್ರಮಕ್ಕಾಗಿ ಬಗರ್ ಹುಕುಂ ಸಮಿತಿ ರಚನೆ ಬಗ್ಗೆ

ಶ್ರೀಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

1121 (1309) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅಕ್ರಮ-ಸಕ್ರಮಕ್ಕಾಗಿ ಬಗರ್ ಹುಕುಂ ಸಮಿತಿಗಳನ್ನು ರಚನೆ ಮಾಡಲಾಗಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು;

(ಆ) ಅಕ್ರಮ-ಸಕ್ರಮಕ್ಕಾಗಿ ಬಗರ್ ಹುಕುಂ ಸಮಿತಿ ಅಸ್ತಿತ್ವಕ್ಕೆ ತರುವ ಯೋಜನೆ ಸರ್ಕಾರದ ಮುಂದಿದೆಯೇ; ಈ ಬಗ್ಗೆ ನ್ಯಾಯಾಲಯ ಸರ್ಕಾರಕ್ಕೆ ಪದೇ ಪದೇ ಎಚ್ಚರಿಕೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ; (ವಿವರ ನೀಡುವುದು)

(ಇ) ಅಕ್ರಮ- ಸಕ್ರಮಕ್ಕಾಗಿ ಬಗರ್ ಹುಕುಂ ಸಮಿತಿ ರಚನೆಯಾದರೆ ಎಷ್ಟು ರೈತರಿಗೆ ಅನುಕೂಲವಾಗುತ್ತದೆ ಹಾಗೂ ಫಾರಂ ನಂ.57ರ ಅಡಿ ಅರ್ಜಿ ಸಲ್ಲಿಸಲು ಇರುವ ಮಾನದಂಡವೇನು? (ವಿವರ ನೀಡುವುದು)